ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ
ಶ್ರೀರಂಗಪಟ್ಟಣ

ಸಿ.ಸಿ. 106/2016

| | |
|---|---|
| ಸಿ.ಡಬ್ಲ್ಯೂ : | 17 |
| ಪಿ.ಡಬ್ಲ್ಯೂ : | 16 |

| | | |
|---|---|---|
| ಸಾಕ್ಷಿದಾರರ ಹೆಸರು | : | ಜೆ.ಜಿ. ಶಿವಮಂಜು |
| ತಂದೆ/ ಪತಿಯ ಹೆಸರು | : | ಲೇಟ್ ಗುರುಸಿದ್ದಯ್ಯ |
| ವಯಸ್ಸು | : | 61 ವರ್ಷ |
| ವೃತ್ತಿ | : | ನಿವೃತ್ತ ಪಿ.ಎಸ್.ಐ |
| ವಾಸ | : | ಕಲ್ಲಹಳ್ಳಿ, ಮಂಡ್ಯ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ: 25.02.2025**

**ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ರವರಿಂದ**

ನಾನು 2011 ನೇ ಇಸವಿಯಿದ 2015 ಇಸವಿವರೆಗೆ ಅರಕೆಗೆ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿನಾಂಕ 04.08.2015 ರಂದು ನಾನು ಠಾಣಾ ಕರ್ತವ್ಯದಲ್ಲಿ ಇದ್ದಾಗ ಸಂಜೆ 5.45 ಗಂಟೆ ಸಮಯದಲ್ಲಿ ಚಾಸಾ.1 ರವರು ಪೊಲೀಸ್ ಠಾಣೆಗೆ ಹಾಜರಾಗಿ ಲಿಖಿತ ದೂರನ್ನು ನೀಡಿದ್ದು, ಸದರಿ ದೂರಿನ ಸಾರಾಂಶದ ಮೇಲಿಂದ ಅಪರಾಧ ಸಂಖ್ಯೆ 130/2015 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ. ಸಾಕ್ಷಿಗೆ ಈಗ ದೂರನ್ನು ತೋರಿಸಿದ್ದು ಸಾಕ್ಷಿ ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ.1 ಎಂದು ಗುರುತಿಸಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಡಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ಪ್ರಥಮ ವರ್ತಮಾನ ವರದಿಯನ್ನು ತೋರಿಸಿದ್ದು ಸಾಕ್ಷಿ ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.11 ಎಂದು ಗುರುತಿಸಲಾಯಿತು.

ನಂತರ ದಿನಾಂಕ 05.08.2015 ರಂದು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿದ್ದು ಚಾಸಾ.1 ರವರು ಸದರಿ ಸ್ಥಳವನ್ನು ತೋರಿಸಿದ ಮೇರೆಗೆ ಪಂಚರರಾದ ಗಿಣಿಸ್ವಾಮಿ ಮತ್ತು ಕಾಳೇಗೌಡರವರ ಸಮಕ್ಷಮ ಸ್ಥಳದ ಮಹಜರ ಕ್ರಮವನ್ನು ಜರುಗಿಸಿರುತ್ತೇನೆ. ಸಾಕ್ಷಿಗೆ ಈಗ ಸ್ಥಳ ಮಹಜರ್ ತೋರಿಸಿದ್ದು ಸಾಕ್ಷಿ ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.2(ಡಿ) ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ.1 ರವರ ಮರು ಹೇಳಿಕೆಯನ್ನುಪಡೆದುಕೊಂಡಿರುತ್ತೇನೆ. ಸಾಕ್ಷಿಗೆ ಈಗ ಚಾಸಾ.1 ರವರ ಮರು ಹೇಳಿಕೆಯನ್ನು ತೋರಿಸಿದ್ದು ಸಾಕ್ಷಿ ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.12 ಎಂದು ಗುರುತಿಸಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.12(ಎ) ಎಂದು ಗುರುತಿಸಲಾಯಿತು. ನಂತರ ಅದೇ ದಿನ ಚಾಸಾ.2 ರಿಂದ 4 ರವರಗುಳನ್ನು ವಿಚಾರಣೆ ಮಾಡಿ ಅವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಸಾಕ್ಷಿಗೆ ಈಗ ಚಾಸಾ.2 ರಿಂದ 4 ರವರ ಮರು ಹೇಳಿಕೆಯನ್ನು ತೋರಿಸಿದ್ದು ಸಾಕ್ಷಿ ಅದನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.13 ರಿಂದ 15 ಎಂದು ಗುರುತಿಸಿದ್ದು ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ.13(ಎ) ರಿಂದ 15(ಎ) ಎಂದು ಗುರುತಿಸಲಾಯಿತು. ನಂತರ ಮುಂದಿನ ತನಿಖೆಗಾಗಿ ಪ್ರಕರಣದ ಕಡತವನ್ನು ಚಾಸಾ.19 ರವರಿಗೆ ವಹಿಸಿಕೊಟ್ಟಿರುತ್ತೇನೆ.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ</u>

ದೂರನ್ನು ನೀಡುವ ಮೊದಲೇ ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗೂ ಅಧ್ಯಕ್ಷರು ಅಂಗನವಾಡಿ ಕೇಂದ್ರಕ್ಕೆ ಮೊದಲೇ ಹೋಗಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವನ್ನು ಚಾಸಾ.1 ರವರು ತಮ್ಮ ದೂರಿನಲ್ಲಿ ತಿಳಿಸಿರುತ್ತಾರೆ ಎಂದರೆ ಸರಿ. ಸ್ಥಳ ಮಹಜರ್ ನ ಪಂಚರರಿಗೆ ನೋಟೀಸನ್ನು ನೀಡಿರುವುದಿಲ್ಲ. ನಾನು ಸ್ಥಳ ಮಹಜರ್ ಗೆ ಹೋದಾಗ ಅಧ್ಯಕ್ಷರು ಮತ್ತು ಪಿ.ಡಿ.ಒ. ರವರು ಸ್ಥಳಕ್ಕೆ ಬಂದಿರುವುದಿಲ್ಲ.

ನಿಮ್ಮ ತನಿಖೆಯ ಪ್ರಕಾರ ಒಬ್ಬರಿಗಿಂತ ಹೆಚ್ಚು ವ್ಯಕ್ತಿಗಳು ಸದರಿ ಕಳ್ಳತನವನ್ನು ಮಾಡಲು ಸಂಭವ ಇರುತ್ತದೆಯೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ಒಬ್ಬ ವ್ಯಕ್ತಿಯೇ ಕಳ್ಳತನ ಮಾಡುವ ಸಂಭವ ಇದೆ ಎಂದು ನುಡಿಯುತ್ತಾರೆ. ನಾನು ಚಾಸಾ.1 ರವರ ಮರು ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಚಾಸಾ.2 ರಿಂದ 4 ರವರ ಹೇಳಿಕೆಗಳನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೆ ಅನುಕೂಲ ಆಗಲಿ ಎಂದು ಅವುಗಳನ್ನು ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ತನಿಖೆಯ ಅವಧಿಯಲ್ಲಿ ನಾನು ಆರೋಪಿಯನ್ನು ನೋಡಿರುವುದಿಲ್ಲ. ಆರೋಪಿಗೆ ತೊಂದರೆ ಕೊಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.